# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 355 |
| ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 07-07-2023 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಗೃಹಲಕ್ಷ್ಮಿ ಯೋಜನೆಯ ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್‌ನಲ್ಲಿ ಸಲ್ಲಿಸಲು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; | ಗೃಹಲಕ್ಷ್ಮಿ ಯೋಜನೆಯ ಅರ್ಜಿಯನ್ನು ನೊಂದಾಯಿಸುವ ಪ್ರಕ್ರಿಯೆ ಪ್ರಾರಂಭವಾಗಿಲ್ಲದೇ ಇರುವುದರಿಂದ ಅನ್ವಯಿಸುವುದಿಲ್ಲ. |
| ಆ. | ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಾಗಲು ಇರಬೇಕಾದ ಅರ್ಹತೆಗಳೇನು; | ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಯು ಈ ಯೋಜನೆಯ ಅರ್ಹ ಫಲಾನುಭವಿಯಾಗಿದ್ದು, ಆಕೆ ಅಥವಾ ಆಕೆಯ ಪತಿ ಆದಾಯ ತೆರಿಗೆ ಹಾಗೂ ಜಿ.ಎಸ್.ಟಿ ಪಾವತಿದಾರರಾಗಿರಬಾರದು. |
| ಇ. | ಗೃಹಲಕ್ಷ್ಮಿ ಯೋಜನೆಯಡಿ ಅರ್ಜಿ ಸಲ್ಲಿಸಿದ ಎಲ್ಲಾ ಫಲಾನುಭವಿಗಳಿಗೆ ಹಣ ನೀಡಲಾಗುತ್ತಿದೆಯೇ; ಅಥವಾ ಪರಿಶೀಲಿಸಿ ಆಯ್ಕೆ ಮಾಡಿ ಹಣ ಸಂದಾಯ ಮಾಡಲಾಗುವುದೇ; | ಗೃಹಲಕ್ಷ್ಮಿ ಯೋಜನೆಯಡಿ ಅರ್ಜಿ ನೊಂದಾಯಿಸುವ ಎಲ್ಲಾ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲಾಗುವುದು. |
| ಈ. | ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಅವರ ಖಾತೆಗೆ ಹಣ ಜಮೆ ಮಾಡಲಾಗುವುದು? | ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ 2023ನೇ ಸಾಲಿನ ಆಗಸ್ಟ್ 15 ರ ನಂತರ ಫಲಾನುಭವಿಗಳ ಖಾತೆಗೆ ರೂ. 2000/-ಗಳನ್ನು ಜಮಾ ಮಾಡಲಾಗುವುದು. |

**ಸಂಖ್ಯೆ: ಮಮಇ 95 ಮಮಅ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.